ನೀರಾವರಿ ಹೋರಾಟಗಾರ ಡಾ.ಮಧು ಸೀತಪ್ಪ ಚಿರಮೌನ

ಚಿಕ್ಕಬಳ್ಳಾಪುರ: ಕರ್ನಾಟಕ ನೀರಾವರಿ ವೇದಿಕೆ ಅಧ್ಯಕ್ಷ ಹಾಗೂ ಬಯಲು ಸೀಮೆಯಲ್ಲಿ ಶಾಶ್ವತ ನೀರಾವರಿ ಹೋರಾಟಗಳಲ್ಲಿ ತೊಡಗಿಸಿಕೊಂಡಿದ್ದ ಡಾ.ಮಧು ಸೀತಪ್ಪ (59) ಬುಧವಾರ ರಾತ್ರಿ ಚೇಳೂರು ತಾಲ್ಲೂಕಿನ ಶಿವಪುರ ಬಳಿಯ ತಮ್ಮ ತೋಟದ ಮನೆಯಲ್ಲಿ ನಿಧನರಾದರು. ಅಂತ್ಯಸಂಸ್ಕಾರವು ಚಿಲಕಲನೇರ್ಪು ಗ್ರಾಮದಲ್ಲಿ ಭಾನುವಾರ ಮಧ್ಯಾಹ್ನ 2 ಗಂಟೆಗೆ ನೆರವೇರಲಿದೆ.

ಮಧು ಅವರು ಚಿಂತಾಮಣಿ ತಾಲ್ಲೂಕಿನ ಚಿಲಕಲನೇರ್ಪು ಗ್ರಾಮದಲ್ಲಿ ಜನಿಸಿದರು. ಅವರ ತಂದೆ ಸೀತಪ್ಪ ಸ್ವಾತಂತ್ರ್ಯ ಹೋರಾಟಗಾರರು. ಲಂಡನ್‌ನಲ್ಲಿ ವೈದ್ಯರಾಗಿದ್ದ ಮಧು ಸೀತಪ್ಪ ನಂತರ ಶಿವಪುರ ಬಳಿಯ ತಮ್ಮ ತೋಟದಲ್ಲಿ ನೆಲೆ ನಿಂತರು.

ಬೆಂಗಳೂರು ಗ್ರಾಮಾಂತರ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿನ ಶಾಶ್ವತ ನೀರಾವರಿ ಹೋರಾಟಗಳಲ್ಲಿ ಮಧು ಸೀತಪ್ಪ ಮುಂಚೂಣಿಯಲ್ಲಿ ಇದ್ದರು. ಬಯಲು ಸೀಮೆಯ ನೀರಾವರಿ ವಿಚಾರವಾಗಿ ಅವರು 'ಮತ್ತೆ ದೋಖಾ ಬೇಡ', 'ಬರ ಬೇಡ' ಎನ್ನುವ ಸಾಕ್ಷ್ಯಚಿತ್ರಗಳನ್ನೂ ನಿರ್ಮಿಸಿದ್ದರು. ನೀರಾವರಿಗೆ ಸಂಬಂಧಿಸಿದ ಕ್ರಾಂತಿಕಾರಿ ಗೀತೆಗಳ ಧ್ವನಿ ಸುರುಳಿ ಸಹ ರೂಪಿಸಿದ್ದರು.

ಮಧು ಸೀತಪ್ಪ

ಕೆಲವು ಸಮಯ ಜೆಡಿಎಸ್‌ನೊಂದಿಗೆ ಗುರುತಿಸಿಕೊಂಡ ಮಧು, ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದಿಂದ ಕಣಕ್ಕೆ ಇಳಿಯಲು ತಯಾರಿ ನಡೆಸಿದ್ದರು. ಆದರೆ ಪಕ್ಷವು ಟಿಕೆಟ್ ನೀಡಲಿಲ್ಲ.

2023ರ ವಿಧಾನಸಭಾ ಚುನಾವಣೆಯಲ್ಲಿ ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದಿಂದ ಎಎಪಿ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದರು. ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದಲ್ಲಿ ಜನಪರ ಹೋರಾಟ ನಡೆಸಿದ್ದರು.

ದೇವನಹಳ್ಳಿ ತಾಲ್ಲೂಕಿನ ಚನ್ನರಾಯಪಟ್ಟಣ ಹೋಬಳಿಯಲ್ಲಿ ಭೂಸ್ವಾಧೀನ ವಿರೋಧಿಸಿ ರೈತರು ನಡೆಸಿದ ಹೋರಾಟದಲ್ಲಿಯೂ ತೊಡಗಿಸಿಕೊಂಡಿದ್ದರು.

ಲಂಡನ್‌ನಿಂದ ಬಂದ ನಂತರ ಅಂತ್ಯಕ್ರಿಯೆ

ನೇತ್ರ ತಜ್ಞರಾದ ಮಧು ಸೀತಪ್ಪ ಕೆಲ ಕಾಲ ಲಂಡನ್‌ನಲ್ಲಿಯೂ ವೈದ್ಯಕೀಯ ವೃತ್ತಿ ಮಾಡಿದ್ದರು. ಅವರ ಪತ್ನಿ ಮತ್ತು ಪುತ್ರ ಲಂಡನ್‌ನಲ್ಲಿದ್ದು ಅವರು ಬಂದ ತರುವಾಯ ಅಂತ್ಯಕ್ರಿಯೆ ಬಗ್ಗೆ ನಿರ್ಧಾರ ಕೈಗೊಳ್ಳಲಾಗುತ್ತದೆ. ದೇವನಹಳ್ಳಿಯ ಆಸ್ಪತ್ರೆಯೊಂದರಲ್ಲಿ ಅವರ ಶವವನ್ನು ಇರಿಸಲಾಗಿದೆ.

'ವಿಶ್ವವಿದ್ಯಾಲಯಕ್ಕೆ ಹೆಗಡೆ ಹೆಸರಿಡಿ'

ರಾಮಕೃಷ್ಣ ಹೆಗಡೆಯವರ 99ನೇ ಜನ್ಮ ದಿನಾಚರಣೆ

ಪ್ರಜಾವಾಣಿ ವಾರ್ತೆ

ಬೆಂಗಳೂರು: ರಾಮಕೃಷ್ಣ ಹೆಗಡೆ ಅವರ ಹೆಸರನ್ನು ಯಾವುದಾದರೂ ವಿಶ್ವವಿದ್ಯಾಲಯಕ್ಕೆ ಇಡಬೇಕು. ಅವರ ಮೌಲ್ಯಾಧಾರಿತ ರಾಜಕಾರಣದ ಬಗ್ಗೆ ಅಧ್ಯಯನ ನಡೆಯಬೇಕು ಎಂದು ಭಾರತ್ ಸ್ಕೌಟ್ಸ್ ಆ್ಯಂಡ್ ಗೈಡ್ಸ್‌ನ ರಾಜ್ಯ ಪ್ರಧಾನ ಆಯುಕ್ತ ಪಿ.ಜಿ.ಆರ್. ಸಿಂಧ್ಯ ತಿಳಿಸಿದರು.

ರಾಮಕೃಷ್ಣ ಅವರ 99ನೇ ಜನ್ಮ ದಿನಾಚರಣೆ ಪ್ರಯುಕ್ತ ಶುಕ್ರವಾರ ನಡೆದ ಚಿಂತನ-ಮಂಥನ ಸಭೆಯಲ್ಲಿ ಅವರು ಮಾತನಾಡಿದರು.

'ಮನಮೋಹನ ಸಿಂಗ್, ಅಕ್ಕಮಹಾದೇವಿ, ರಾಣಿ ಚನ್ನಮ್ಮ ಸಹಿತ ಅನೇಕರ ಹೆಸರುಗಳನ್ನು ವಿಶ್ವವಿದ್ಯಾಲಯಗಳಿಗೆ ಇಡಲಾಗಿದೆ. ಅದಕ್ಕೆ ನನ್ನ ವಿರೋಧವಿಲ್ಲ. ಹಲವು ಪ್ರಥಮಗಳಿಗೆ ಕಾರಣರಾದ ಹೆಗಡೆಯವರ ಹೆಸರಲ್ಲಿಯೂ ವಿಶ್ವವಿದ್ಯಾಲಯ ಇರಬೇಕು' ಎಂದು ಆಶಿಸಿದರು.

ದೇಶದಲ್ಲಿಯೇ ಮೊದಲ ಬಾರಿಗೆ ವಿಧವಾ ವೇತನ, ರೈತರ ಸಾಲ ಮನ್ನಾ ಯೋಜನೆ ಜಾರಿಯಾಗಿದ್ದು ಕರ್ನಾಟಕದಲ್ಲಿ. ಅದನ್ನು ಜಾರಿಗೆ ತಂದವರು ಹೆಗಡೆ ಅವರು ಎಂದು ನೆನಪು ಮಾಡಿಕೊಂಡರು.

ಮಾಜಿ ಮುಖ್ಯಮಂತ್ರಿ ಎಸ್. ನಿಜಲಿಂಗಪ್ಪ ಅವರು ರಾಮಕೃಷ್ಣ ಹೆಗಡೆ ಮತ್ತು ವೀರೇಂದ್ರ ಪಾಟೀಲರನ್ನು ಲವ-ಕುಶ ಎಂದು ಕರೆಯುತ್ತಿದ್ದರು. ಇಬ್ಬರನ್ನೂ ಬೆಳೆಸಿದರು. ಆ ನಂತರ ನಿಜಲಿಂಗಪ್ಪ ಅವರನ್ನು ಬಿಟ್ಟು ಬಂದರೆ ಮುಖ್ಯಮಂತ್ರಿ ಮಾಡುವುದಾಗಿ ಇಂದಿರಾಗಾಂಧಿ ಅವರು ಹೆಗಡೆಯವರನ್ನು ಆಹ್ವಾನಿಸಿದ್ದರು. ಆದರೆ, ಹೆಗಡೆ ಹೋಗಲಿಲ್ಲ. ನಿಜಲಿಂಗಪ್ಪ ಅವರ ಜೊತೆಗೆ ಕೊನೆಯವರೆಗೂ ಉಳಿದವರು ಹೆಗಡೆ ಒಬ್ಬರೇ. ಈಗ ಬೆಳೆಸುವವರೂ ಇಲ್ಲ. ಈ ರೀತಿ ನಿಷ್ಠೆ ತೋರುವವರೂ ಇಲ್ಲ ಎಂದು ಹೇಳಿದರು.

ಜನತಾ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೈಪ್ರಕಾಶ್ ಬಂಧು ಅಧ್ಯಕ್ಷತೆ ವಹಿಸಿದ್ದರು. ಭರತನಾಟ್ಯ ಕಲಾವಿದೆ ಪ್ರತಿಭಾ ಪ್ರಹ್ಲಾದ್, ವಿಧಾನ ಪರಿಷತ್ತಿನ ಮಾಜಿ ಸದಸ್ಯ ಎಂ.ಪಿ. ನಾಡಗೌಡ, ಕನ್ನಡಪ್ರಭ ಪ್ರಧಾನ ಸಂಪಾದಕ ರವಿ ಹೆಗಡೆ, ಜನತಾಪಕ್ಷದ ರಾಷ್ಟ್ರೀಯ ಮಹಿಳಾ ಅಧ್ಯಕ್ಷೆ ವಾಣಿ ಎನ್. ಶೆಟ್ಟಿ, ಸ್ವಾಮಿ ವಿವೇಕಾನಂದ ಪೀಠಾಧ್ಯಕ್ಷ ಮಹಾಂತೇಶ ಸಿದ್ಧ ಗುರೂಜಿ, ಜನತಾ ಪಕ್ಷದ ರಾಜ್ಯ ನಾಯಕರಾದ ರಾಜೌ ಎ., ಮಾದೇಗೌಡ, ಸಂಘಟಕ ನಾಗೇಶ್ ಉಪಸ್ಥಿತರಿದ್ದರು. ವಿವಿಧ ರಂಗಗಳ ಸಾಧಕರಿಗೆ ಮೌಲ್ಯಾಧಾರಿತ 'ಕಾಯಕಶ್ರೀ' ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಜನತಾ ಪಕ್ಷ ನಗರದಲ್ಲಿ ಶುಕ್ರವಾರ ಆಯೋಜಿಸಿದ್ದ ರಾಮಕೃಷ್ಣ ಹೆಗಡೆ ಜನ್ಮದಿನಾಚರಣೆ, ಚಿಂತನ ಮಂಥನ ಸಭೆಯಲ್ಲಿ ಪುಷ್ಪಾರ್ಚನೆ ಮಾಡಲಾಯಿತು. ಕೋಡಿಹಳ್ಳಿ ಚಂದ್ರಶೇಖರ್, ಪಿ.ಜಿ.ಆರ್. ಸಿಂಧ್ಯ,ಜೈ. ಪ್ರಕಾಶ್ ಬಂಧು, ಪ್ರತಿಭಾ ಪ್ರಹ್ಲಾದ್, ಎಂ.ಪಿ. ನಾಡಗೌಡ,ಪಿ.ಜಿ.ಆರ್. ಸಿಂಧ್ಯ,ರವಿ ಹೆಗಡೆ ಭಾಗವಹಿಸಿದ್ದರು –ಪ್ರಜಾವಾಣಿ ಚಿತ್ರ

ಕಾವೇರಿ ವಿವಾದ ಇತ್ಯರ್ಥವಾಗುತ್ತಿತ್ತು!

ತಮಿಳುನಾಡು ಮತ್ತು ಕರ್ನಾಟಕದ ಮಧ್ಯೆ ಕಾವೇರಿ ನೀರು ಹಂಚಿಕೆ ವಿವಾದ ರಾಮಕೃಷ್ಣ ಹೆಗಡೆಯವರ ನೇತೃತ್ವದಲ್ಲಿ ಇತ್ಯರ್ಥ ವಾಗುವ ಹಂತಕ್ಕೆ ಬಂದಿತ್ತು ಎಂದು ಪಿ.ಜಿ.ಆರ್. ಸಿಂಧ್ಯ ತಿಳಿಸಿದರು.

ತಮಿಳುನಾಡಿನಲ್ಲಿ ಎಂ.ಜಿ.ರಾಮಚಂದ್ರನ್ ಮುಖ್ಯಮಂತ್ರಿಯಾಗಿದ್ದರು. ಕರ್ನಾಟಕದಲ್ಲಿ ಮುಖ್ಯಮಂತ್ರಿಯಾಗಿದ್ದ ರಾಮಕೃಷ್ಣ ಹೆಗಡೆಯವರು ಎಂ.ಜಿ.ಆರ್ ಅವರನ್ನು ಕಾವೇರಿ ನೀರಿನ ಸಮಸ್ಯೆ ಬಗ್ಗೆ ಚರ್ಚಿಸಲು ಕರೆದಿದ್ದರು. ಆ ಸಭೆಯಲ್ಲಿ ಎಚ್.ಡಿ. ದೇವೇಗೌಡ, ಎಸ್.ಆರ್. ಬೊಮ್ಮಾಯಿ ಸಹಿತ ಅನೇಕರಿದ್ದರು. 180 ಟಿಎಂಸಿ ಅಡಿ ನೀರು ಬಿಡುವುದಿದ್ದರೆ ಒಪ್ಪಂದಕ್ಕೆ ಸಹಿ ಹಾಕಲು ತಯಾರು ಎಂದು ಎಂ.ಜಿ.ಆರ್. ತಿಳಿಸಿದ್ದರು. ಹೆಗಡೆಯವರೂ ಒಪ್ಪಿದ್ದರು. ಆದರೆ, ನಮ್ಮಲ್ಲಿ ಕೆಲವರು ವಿರೋಧಿಸಿದ್ದರಿಂದ ಆಗ ಒಪ್ಪಂದವಾಗಲಿಲ್ಲ ಎಂದು ನೆನಪು ಮಾಡಿಕೊಂಡರು.

ಸಮಸ್ಯೆ ಇತ್ಯರ್ಥವಾಗಬೇಕು ಎಂದು ಬಯಸಿದ್ದ ಎಂಜಿಆರ್ ಆ ಮೇಲೆ ಹೆಚ್ಚು ಸಮಯ ಬದುಕಲಿಲ್ಲ. ಆ ನಂತರ ಬಂದ ರಾಜಕಾರಣಿಗಳಿಗೆ ವಿವಾದ ಮುಕ್ತಾಯವಾಗುವುದು ಇಷ್ಟವಾಗದೇ ಜೀವಂತವಾಗಿಡುತ್ತಾ ಬಂದರು. ನ್ಯಾಯಾಧೀಕರಣದ ಆದೇಶದಂತೆ 195 ಟಿಎಂಸಿ ಅಡಿ ನೀರು ಬಿಡಬೇಕಾಗಿ ಬಂತು ಎಂದರು.

ನಗರದ ಪ್ರಮುಖ ಸ್ಥಳಕ್ಕೆ ಹೆಗಡೆ ಹೆಸರು: ಡಿಕೆಶಿ ಭರವಸೆ

ಬೆಂಗಳೂರು: 'ನಗರದ ಪ್ರಮುಖ ಸ್ಥಳಕ್ಕೆ ಮಾಜಿ ಮುಖ್ಯಮಂತ್ರಿ ರಾಮಕೃಷ್ಣ ಹೆಗಡೆ ಅವರ ಹೆಸರನ್ನು ಇಡಲಾಗುವುದು' ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಭರವಸೆ ನೀಡಿದರು.

ಕರ್ನಾಟಕ ಚಿತ್ರಕಲಾ ಪರಿಷತ್ತಿನಲ್ಲಿ ಶುಕ್ರವಾರ ನಡೆದ ಮಾಜಿ ಮುಖ್ಯಮಂತ್ರಿ ದಿವಂಗತ ರಾಮಕೃಷ್ಣ ಹೆಗಡೆ ಅವರ 99ನೇ ಜನ್ಮದಿನ ಕಾರ್ಯಕ್ರಮದಲ್ಲಿ ಶಿವಕುಮಾರ್ ಅವರು ಮಾತನಾಡಿದರು.

'ರಾಮಕೃಷ್ಣ ಹೆಗಡೆ ಅವರ ಹೆಸರು ಶಾಶ್ವತವಾಗಿ ಉಳಿಯಬೇಕು. ಹೀಗಾಗಿ ಎಲ್ಲರೊಂದಿಗೆ ಜೊತೆ ಚರ್ಚೆ ಮಾಡಿ, ನಗರದ ಪ್ರಮುಖ ಸ್ಥಳಕ್ಕೆ ಅವರ ಹೆಸರು ಇಡಲಾಗುವುದು. ಇದಕ್ಕೆ ನಾನು ಬದ್ಧ' ಎಂದರು.

'ಹೆಗಡೆ ಅವರು ಕನಕಪುರದಿಂದ ಸ್ಪರ್ಧೆ ಮಾಡಿದ್ದರು. ಅವರನ್ನು ಸೋಲಿಸಲು ನಾನು ವಿದ್ಯಾರ್ಥಿ ನಾಯಕನಾಗಿ ಹೋರಾಟ ಮಾಡಿದೆ. ನನ್ನ ಹೋರಾಟ ಗಮನಿಸಿ 1985ರಲ್ಲಿ ಪಕ್ಷ ನನಗೆ ಟಿಕೆಟ್ ನೀಡಿತು. ಅವರು ಮುಖ್ಯಮಂತ್ರಿ ಆಗಿದ್ದಾಗ ನಡೆದ ಲೋಕಸಭೆ ಚುನಾವಣೆಯಲ್ಲಿ ಅವರ ಪಕ್ಷಕ್ಕೆ ಹಿನ್ನಡೆಯಾದಾಗ, ನನ್ನ ನಾಯಕತ್ವಕ್ಕೆ ಬೆಂಬಲ ಸಿಗಲಿಲ್ಲ ಎಂದು ಮತ್ತೆ ಚುನಾವಣೆಗೆ ಹೋದರು' ಎಂದು ಮೆಲುಕು ಹಾಕಿದರು.

'ಹೆಗಡೆ ಅವರು ಬಿಟ್ಟುಹೋದ ಆದರ್ಶ, ಸಾಕ್ಷಿಗುಡ್ಡೆಗಳು ಇನ್ನೂ ಜೀವಂತವಾಗಿವೆ. ಅವರು ದೂರದೃಷ್ಟಿಯುಳ್ಳ ನಾಯಕ. ನೂರಾರು ನಾಯಕರನ್ನು ಬೆಳೆಸಿದ್ದಾರೆ. ಕೆಲವರು ಅವರ ಪ್ರಾಮಾಣಿಕತೆಗೆ ನಿಯತ್ತು ತೋರಿದರು. ಮತ್ತೆ ಕೆಲವರು ಹತ್ತಿದ ಏಣಿಯನ್ನು ಒದೆಯುವಂತೆ ಬಿಸಾಕಿದರು. ರಾಮಕೃಷ್ಣ ಹೆಗಡೆ ಅವರನ್ನು ಉಚ್ಚಾಟನೆ ಮಾಡಿದ ದಿನ ನನಗೆ ಚೆನ್ನಾಗಿ ನೆನಪಿದೆ. ನಾನು ವಿಧಾನಸಭೆಗೆ ಹೋಗುತ್ತಿರುವಾಗ ದೇಶಪಾಂಡೆ ಅವರು ಗಾಬರಿಯಿಂದ ಕೆಳಗೆ ಇಳಿದು ಬರುತ್ತಿದ್ದರು. ನಾನು ಯಾಕೆ ಎಂದು ಕೇಳಿದೆ. ಆ ಸಂದರ್ಭದಲ್ಲಿ ಕೇವಲ ದೇಶಪಾಂಡೆ ಮಾತ್ರ ಧ್ವನಿ ಎತ್ತಿದ್ದರು, ಉಳಿದವರು ಅಧಿಕಾರದ ಆಸೆಯಿಂದ ಮೌನಕ್ಕೆ ಶರಣಾಗಿದ್ದರು' ಎಂದರು.

ಬೆಂಗಳೂರು ವಿ.ವಿಯಲ್ಲಿ 'ಶ್ರೀರಾಮ'ನ ವಿವಾದ

ಪ್ರಜಾವಾಣಿ ವಾರ್ತೆ

ಮುಖ್ಯಾಂಶಗಳು
- ವಿಚಾರಸಂಕಿರಣಕ್ಕೆ ಪ್ರಬಂಧಗಳ ಆಹ್ವಾನ
- ವಿರೋಧ ವ್ಯಕ್ತವಾದ ಬೆನ್ನಲ್ಲೇ ವೆಬ್‌ಸೈಟ್‌ನಲ್ಲಿ ಇದ್ದ ಸುತ್ತೋಲೆ ತೆಗೆಯಲಾಯಿತು

ಬೆಂಗಳೂರು: ಶ್ರೀರಾಮ ಅವರ ಬಗ್ಗೆ ಹಮ್ಮಿಕೊಂಡಿರುವ ವಿಚಾರಸಂಕಿರಣಕ್ಕೆ ಪ್ರಬಂಧಗಳನ್ನು ಸಲ್ಲಿಸುವಂತೆ ಬೆಂಗಳೂರು ವಿಶ್ವವಿದ್ಯಾಲಯ ಹೊರಡಿಸಿರುವ ಸುತ್ತೋಲೆ ವಿವಾದಕ್ಕೆ ಎಡೆಮಾಡಿಕೊಟ್ಟಿದ್ದು, ವಿಶ್ವವಿದ್ಯಾಲಯದ ಹಲವು ಬೋಧಕರು, ವಿದ್ಯಾರ್ಥಿಗಳು ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಧಾರವಾಡದ ಕರ್ನಾಟಕ ಐತಿಹಾಸಿಕ ಸಂಶೋಧನಾ ಸೊಸೈಟಿ (ಕೆಎಚ್‌ಆರ್‌ಎಸ್) ಧಾರವಾಡದ ಬಹುಶಿಸ್ತೀಯ ಅಭಿವೃದ್ಧಿ ಸಂಶೋಧನಾ ಕೇಂದ್ರದ ಸಹಯೋಗದೊಂದಿಗೆ 'ಸಮಕಾಲೀನ ಜೀವನ ಅಧ್ಯಯನಗಳು ಮತ್ತು ಆಧುನಿಕ ಸಮಾಜಕ್ಕಾಗಿ ಶ್ರೀರಾಮನ ಜೀವನದ ಪಾಠಗಳು' ಬಗ್ಗೆ ರಾಷ್ಟ್ರೀಯ ವಿಚಾರಸಂಕಿರಣವನ್ನು ಸೆಪ್ಟೆಂಬರ್ 10 ಮತ್ತು 11ರಂದು ಧಾರವಾಡದಲ್ಲಿ ಆಯೋಜಿಸಲಾಗಿದೆ.

ಈ ಬಗ್ಗೆ ಆಗಸ್ಟ್ 6ರಂದು ಸುತ್ತೋಲೆ ಹೊರಡಿಸಿರುವ ಬೆಂಗಳೂರು ವಿಶ್ವವಿದ್ಯಾಲಯದ ಕುಲಸಚಿವರು, ವಿಚಾರಸಂಕಿರಣದಲ್ಲಿ ಭಾಗವಹಿಸಿ ಪ್ರಬಂಧಗಳನ್ನು ಮಂಡಿಸುವಂತೆ ವಿಶ್ವವಿದ್ಯಾಲಯದ ಎಲ್ಲ ವಿಭಾಗಗಳಿಗೆ ಸೂಚಿಸಿದ್ದಾರೆ. ಸುತ್ತೋಲೆಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿತ್ತು. ಇದಕ್ಕೆ ವಿರೋಧ ವ್ಯಕ್ತವಾಗುತ್ತಿದ್ದಂತೆಯೇ ವೆಬ್‌ಸೈಟ್‌ನಿಂದ ಸುತ್ತೋಲೆಯನ್ನು ಶುಕ್ರವಾರ ತೆಗೆಯಲಾಗಿದೆ.

ಈ ಕಾರ್ಯಕ್ರಮದ ಪ್ರಚಾರಕ್ಕಾಗಿ ಬೆಂಗಳೂರು ವಿಶ್ವವಿದ್ಯಾಲಯವನ್ನು ಬಳಸಿಕೊಂಡಿರುವುದಕ್ಕೆ ಪ್ರಾಧ್ಯಾಪಕರು, ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಕ್ಷೇತ್ರದ ಹಲವರು ವಿರೋಧ ವ್ಯಕ್ತಪಡಿಸಿದ್ದಾರೆ.

'ಇದು ಕಳವಳಕಾರಿ ಬೆಳವಣಿಗೆ. ಇದರಿಂದ ವಿಶ್ವವಿದ್ಯಾಲಯದ ಜಾತ್ಯತೀತ ಸ್ವರೂಪಕ್ಕೆ ಧಕ್ಕೆಯಾಗಲಿದೆ. ಸಂವಿಧಾನದ ಸ್ಪಷ್ಟ ಉಲ್ಲಂಘನೆಯಾಗಿದೆ' ಎಂದು ಪ್ರಾಧ್ಯಾಪಕರೊಬ್ಬರು ತಿಳಿಸಿದರು.

'ವಿಶ್ವವಿದ್ಯಾಲಯದ ಜಾತ್ಯತೀತ ತತ್ವವನ್ನೇ ಪ್ರಶ್ನಿಸುವ ಇಂಥ ಸಮ್ಮೇಳನವನ್ನು ಯಾಕೆ ಪ್ರೋತ್ಸಾಹಿಸಬೇಕು' ಎಂದು ಬೆಂಗಳೂರು ವಿಶ್ವವಿದ್ಯಾಲಯದ ಎಸ್.ಸಿ, ಎಸ್.ಟಿ ಬೋಧಕರ ಸಂಘದ ಅಧ್ಯಕ್ಷ ಜಿ.ಕೃಷ್ಣಮೂರ್ತಿ ಪ್ರಶ್ನಿಸಿದ್ದಾರೆ.

ಈ ಸುತ್ತೋಲೆಯನ್ನು ವಾಪಸ್ ಪಡೆಯಲು ಕುಲಪತಿಯವರಿಗೆ ಮನವಿ ಮಾಡಲಾಗುವುದು. ಅವರು ಸುತ್ತೋಲೆ ವಾಪಸ್ ಪಡೆಯದೇ ಇದ್ದರೆ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಅವರು ಎಚ್ಚರಿಸಿದ್ದಾರೆ.

ಬೆಂಗಳೂರು ವಿಶ್ವವಿದ್ಯಾಲಯದ ಕುಲಪತಿ ಎಂ.ಎಸ್. ಜಯಕರ ಮತ್ತು ಕುಲಸಚಿವರ ಪ್ರತಿಕ್ರಿಯೆಗಾಗಿ ಪ್ರಯತ್ನಿಸಲಾಯಿತು. ಆದರೆ, ಅವರು ಮೊಬೈಲ್ ಕರೆಯನ್ನು ಸ್ವೀಕರಿಸಲಿಲ್ಲ.

ಬಿಎಂಸಿಆರ್‌ಐಗೆ ಡಾ.ಕಾವ್ಯ ನಿರ್ದೇಶಕಿ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯ (ಬಿಎಂಸಿಆರ್‌ಐ) ವೈದ್ಯಶಾಸ್ತ್ರ ವಿಭಾಗದ ಪ್ರಾಧ್ಯಾಪಕಿ ಡಾ.ಕಾವ್ಯ ಎಸ್.ಟಿ. ಅವರಿಗೆ, ಬಿಎಂಸಿಆರ್‌ಐ ನಿರ್ದೇಶಕಿ ಮತ್ತು ಡೀನ್ ಹುದ್ದೆಯ ಹೆಚ್ಚುವರಿ ಹೊಣೆ ನೀಡಿ ವೈದ್ಯಕೀಯ ಶಿಕ್ಷಣ ಇಲಾಖೆ ಆದೇಶಿಸಿದೆ.

ಡಾ.ಕಾವ್ಯ ಎಸ್‌ಟಿ

ಈ ಹುದ್ದೆಯ ಹೆಚ್ಚುವರಿ ಹೊಣೆಯಿಂದ ಡಾ.ರಾಮಕೃಷ್ಣ ಕೆ.ಅವರನ್ನು ತಕ್ಷಣದಿಂದಲೇ ಜಾರಿಗೆ ಬರುವಂತೆ ಕರ್ತವ್ಯದಿಂದ ಬಿಡುಗಡೆ ಮಾಡಲಾಗಿದೆ.

ಚಿಟಿಕೆ ಸುದ್ದಿ

3ರು ಓಣಂ: 90 ವಿಶೇಷ ಬಸ್ ವ್ಯವಸ್ಥೆ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಕೇರಳದಲ್ಲಿ ಸೆಪ್ಟೆಂಬರ್ 5ರಂದು ತಿರು ಓಣಂ ಹಬ್ಬದ ಆಚರಣೆ ಇರುವ ಪ್ರಯುಕ್ತ ಬೆಂಗಳೂರಿನಿಂದ ಕೇರಳದ ವಿವಿಧ ಪ್ರದೇಶಗಳಿಗೆ ಕೆಎಸ್‌ಆರ್‌ಟಿಸಿಯ 90 ವಿಶೇಷ ಬಸ್‌ಗಳು ಸೆ.2ರಿಂದ ಸಂಚರಿಸಲಿವೆ.

ಸೆಪ್ಟೆಂಬರ್ 2ರಿಂದ 4ರವರೆಗೆ ಬೆಂಗಳೂರಿನಿಂದ ಕೇರಳಕ್ಕೆ ಹಾಗೂ ಸೆ. 7ರಂದು ಕೇರಳದಿಂದ ಬೆಂಗಳೂರಿಗೆ ಈ ವಿಶೇಷ ಬಸ್‌ಗಳ ವ್ಯವಸ್ಥೆ ಇರಲಿದೆ.

ಮೈಸೂರು ರಸ್ತೆ ಬಸ್ ನಿಲ್ದಾಣ ಹಾಗೂ ಶಾಂತಿನಗರ ಬಸ್ ನಿಲ್ದಾಣದಿಂದ ಕಣ್ಣೂರು, ಕೋಯಿಕ್ಕೋಡ್, ಎರ್ನಾಕುಲಂ, ಪಾಲಕ್ಕಾಡ್, ತ್ರಿಶೂರ್, ಕೋಟಯಂ, ತಿರುವನಂತಪುರಂ ಮುಂತಾದ ಸ್ಥಳಗಳಿಗೆ ವಿಶೇಷ ಬಸ್‌ಗಳು ಸಂಚರಿಸಲಿವೆ.

ಸಾರ್ವಜನಿಕರಿಗೆ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. www.ksrtc.karnataka.gov.in ವೆಬ್‌ಸೈಟ್ ಮೂಲಕ ಇ-ಟಿಕೆಟ್ ಬುಕಿಂಗ್ ಮಾಡಬಹುದು. ನಾಲ್ಕು ಅಥವಾ ಹೆಚ್ಚು ಪ್ರಯಾಣಿಕರು ಒಟ್ಟಾಗಿ ಮುಂಗಡ ಟಿಕೆಟ್ ಕಾಯ್ದಿರಿಸಿದಲ್ಲಿ ಶೇಕಡ 5ರಷ್ಟು ರಿಯಾಯಿತಿ ದೊರೆಯಲಿದೆ. ಹೋಗುವ ಮತ್ತು ಬರುವ ಪ್ರಯಾಣದ ಟಿಕೆಟ್ ಒಟ್ಟಿಗೆ ಕಾಯ್ದಿರಿಸಿದಾಗ ಬರುವ ಪ್ರಯಾಣ ದರದಲ್ಲಿ ಶೇಕಡ 10 ರಷ್ಟು ರಿಯಾಯಿತಿ ನೀಡಲಾಗುವುದು ಎಂದು ಕೆಎಸ್‌ಆರ್‌ಟಿಸಿ ಮುಖ್ಯ ಸಂಚಾರ ವ್ಯವಸ್ಥಾಪಕರು ತಿಳಿಸಿದ್ದಾರೆ.

ವಿದ್ಯುತ್ ವ್ಯತ್ಯಯ ಇಂದು

ಪ್ರಜಾವಾಣಿ ವಾರ್ತೆ

ಬೆಂಗಳೂರು: ಮಾನ್ಯತಾ 66/11 ಕೆ.ವಿ. ಉಪ ಕೇಂದ್ರದಲ್ಲಿ ತುರ್ತು ನಿರ್ವಹಣೆ ಕೈಗೊಳ್ಳುವ ಕಾರಣ ಇದೇ 30ರಂದು ಬೆಳಿಗ್ಗೆ 9ರಿಂದ ಸಂಜೆ 6 ಗಂಟೆಯವರೆಗೆ ನಗರದ ಕೆಲವೆಡೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

ವಿದ್ಯುತ್ ವ್ಯತ್ಯಯವಾಗುವ ಸ್ಥಳಗಳು: ಶೋಭಾ ನಗರ, ಚೊಕ್ಕನಹಳ್ಳಿ, ಡೊಮಿನೊ ಪಿಜ್ಜಾ ಇನ್ ಪ್ಯಾರಡೈಸ್, ನೂರ್ ನಗರ, ಮಾಜಿ ಸೈನಿಕ ಲೇಔಟ್, ಪೊಲೀಸ್ ಕ್ವಾರ್ಟರ್ಸ್, ಆರ್.ಕೆ. ಹೆಗಡೆ ನಗರ, ಶಬರಿ ನಗರ, ಹೊಸ ಶಾಂತಿ ನಗರ, ಕೆಂಪೇಗೌಡ ಲೇಔಟ್, ನಾಗೇನಹಳ್ಳಿ